**ಕರ್ನಾಟಕ ಸರ್ಕಾರ**

ಸಂ:ಡಿ.ವೈ.ಇ.ಎಸ್/ಕ್ರೀಚಕಪ್ರೋ/69/2025-26

ಆಯುಕ್ತರ ಕಾರ್ಯಾಲಯ
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ
ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ,
ಬೆಂಗಳೂರು-01, ದಿನಾಂಕ: 17-07-2026

**ಸುತ್ತೋಲೆ**

ವಿಷಯ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಾರ್ಯಕ್ರಮಗಳಡಿ 2025 ನೇ ಸಾಲಿನ ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿಗಾಗಿ ಅರ್ಜಿಗಳನ್ನು ಆಹ್ವಾನಿಸುವ ಕುರಿತು.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2026-27 ನೇ ಸಾಲಿನ ಕ್ರೀಡಾ ಕಲ್ಯಾಣ ಯೋಜನೆ ಅಡಿಯಲ್ಲಿ ಅಂತರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಅದೀಕೃತ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳಿಗೆ 2025 ನೇ ಸಾಲಿನ ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿಗಾಗಿ ಪ್ರೋತ್ಸಾಹಧನ ನೀಡಲು ಅರ್ಜಿಗಳನ್ನು ಆನ್ ಲೈನ್ ಮೂಲಕ ಆಹ್ವಾನಿಸಲಾಗಿದೆ.

ಅಸಕ್ತ ಕ್ರೀಡಾಪಟುಗಳು ಅರ್ಜಿಗಳನ್ನು ಅಧಿಕೃತ ಜಾಲತಾಣ: **https://sevasindu.karnataka.gov.in** ಮೂಲಕ ಕಡ್ಡಾಯವಾಗಿ ಆನ್‌ಲೈನ್ ಮೂಲಕ ನಿಗದಿತ ದಿನಾಂಕದೊಳಗೆ ಸಲ್ಲಿಸಲು ಸೂಚಿಸಲಾಗಿದೆ. ಅರ್ಜಿ ಸಲ್ಲಿಸಲು ಅಂತಿಮ **ದಿನಾಂಕ:31.07.2026 ರಂದು ಕೊನೆಯ ದಿನಾಂಕವಾಗಿರುತ್ತದೆ,** ಈ ಬಗ್ಗೆ ತಮ್ಮ ಜಿಲ್ಲೆಯಲ್ಲಿ ಹೆಚ್ಚು ಪ್ರಚಾರದಲ್ಲಿರುವ ಸ್ಥಳೀಯ ದಿನ ಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರ ನೀಡಿ ಪತ್ರಿಕಾ ವರದಿ ಪ್ರತಿಯನ್ನು ಕೇಂದ್ರ ಕಛೇರಿಗೆ ಸಲ್ಲಿಸಲು ತಿಳಿಸಿದೆ.

**(ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಯುವ ಸಹಾಯವಾಣಿ 155265 ಗೆ ಕಛೇರಿ ಅವಧಿಯಲ್ಲಿ ಸಂಪರ್ಕಿಸಲು ಸೂಚಿಸಿದೆ.**

ಆಯುಕ್ತರು
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ

ಗೆ,

1. ಮಾನ್ಯ ಉಪಾಧ್ಯಕ್ಷರು, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಕಂಠೀರವ ಕ್ರೀಡಾಂಗಣ.
2. ಮಹಾನಿರ್ದೇಶಕರು, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಬೆಂಗಳೂರು.
3. ಅಧ್ಯಕ್ಷರು, ಕರ್ನಾಟಕ ಒಲಂಪಿಕ್ ಸಂಸ್ಥೆ, ಬೆಂಗಳೂರು.
4. ಎಲ್ಲಾ ಜಿಲ್ಲೆಗಳ ಉಪ/ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.
5. ರಾಜ್ಯದ ಎಲ್ಲಾ ಕ್ರೀಡಾ ಸಂಸ್ಥೆಗಳ ಅಧ್ಯಕ್ಷರು/ಕಾರ್ಯದರ್ಶಿಗಳು.
6. ಹೆಚ್ಚುವರಿ ಪ್ರತಿ.

# ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿಯ ಮಾರ್ಗಸೂಚಿಗಳು

ಕರ್ನಾಟಕ ರಾಜ್ಯದ ಕ್ರೀಡಾ ಪೋಷಕರಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿಯನ್ನು ಸಂಘ ಸಂಸ್ಥೆಗಳಿಗೆ ಸೇವೆಯನ್ನು ಪರಿಗಣಿಸಿ ಗೌರವಿಸಲಾಗುವುದು.

ಅ) ರಾಜ್ಯದಲ್ಲಿ ಕ್ರೀಡಾಪಟುಗಳು ಕ್ರೀಡಾ ಕ್ಷೇತ್ರದಲ್ಲಿ ಸಾಧಿಸಿದ ಅತ್ಯುತ್ತಮ ಸಾಧನೆಯನ್ನು ಗುರುತಿಸಿ ಕ್ರೀಡಾ ಪೋಷಕರಿಗೆ ಪ್ರಶಸ್ತಿಯನ್ನು ನೀಡಿ ಪ್ರೋತ್ಸಾಹಿಸುವುದು.
ಆ) ಕ್ರೀಡಾ ಪ್ರತಿಭೆಗಳಿಗೆ ಪ್ರೋತ್ಸಾಹ ನೀಡುವುದು ಮತ್ತು ಕ್ರೀಡಾಪಟುಗಳನ್ನು ಗುರುತಿಸುವುದು.
ಇ) ಕ್ರೀಡಾಪಟುಗಳ ಅಭಿವೃದ್ಧಿಗೆ ಉತ್ತೇಜನ ನೀಡುವುದು.
ಈ) ಕ್ರೀಡಾಪಟುಗಳಿಗೆ ಉದ್ಯೋಗವನ್ನು ಸೃಷ್ಟಿಸುವ ಹಾಗೂ ಕ್ರೀಡಾ ಕಲ್ಯಾಣ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಸಂಘಟಕರನ್ನು ಗುರುತಿಸುವುದು.
ಉ) ಕ್ರೀಡಾಪಟುಗಳಿಗೆ ಶುಲ್ಕ ರಹಿತ ಶೈಕ್ಷಣಿಕ ಸೌಳಭ್ಯಗಳನ್ನು ಒದಗಿಸುವುದು.

ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿಗೆ ಈ ಕೆಳಕಾಣಿಸಿದ ಇಲಾಖೆ, ಸಂಘ ಸಂಸ್ಥೆಗಳ ಮೂಲಕ ಅರ್ಜಿ ಸ್ವೀಕರಿಸಲಾಗುವುದು.
ಅ) ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಜಿಲ್ಲಾ ಕಚೇರಿಗಳಿಂದ.
ಆ) ಕ್ರೀಡಾ ಸಂಘ/ಸಂಸ್ಥೆಗಳು
ಇ) ನೇರವಾಗಿ ಅರ್ಜಿ ಸಲ್ಲಿಸಬಹುದು
ಈ) ವಿಶ್ವ ವಿದ್ಯಾಲಯ/ಕಾಲೇಜು
ಉ) ಮಾಧ್ಯಮದ ಮೂಲಕ

- ಅರ್ಜಿ ನಮೂನೆಯಲ್ಲಿ ಎಲ್ಲಾ ಕಾಲಂಗಳನ್ನು ಕಡ್ಡಾಯವಾಗಿ ತುಂಬತಕ್ಕದ್ದು.
- 5 ವರ್ಷಗಳ ಕ್ರೀಡಾ ಸಾಧನೆಯ ಪ್ರಶಸ್ತಿ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
- ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕ್ರೀಡೆಗಳಲ್ಲಿ ಪ್ರಶಸ್ತಿ ನೀಡಿದ ವರ್ಷ ಸೇರಿದಂತೆ ಕಳೆದ 5 ವರ್ಷಗಳ ಕ್ರೀಡಾ ಸಾಧನೆಯ ಪ್ರಸ್ತಾವನೆ/ವರದಿ, ಪ್ರಶಸ್ತಿ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
- ಅರ್ಜಿ ನಮೂನೆಯೊಂದಿಗೆ ಸಲ್ಲಿಸುವ ಪತ್ರಗಳನ್ನು ಕಡ್ಡಾಯವಾಗಿ ಸ್ವಯಂ ಸೃಢೀಕರಿಸಿ ಸಲ್ಲಿಸತಕ್ಕದ್ದು.
- ಕ್ರೀಡಾ ಕ್ಷೇತ್ರದಲ್ಲಿ ತಮ್ಮನ್ನು ತೊಡಗಿಸಿಕೊಂಡು ಕ್ರೀಡೆಯ ಅಭಿವೃದ್ಧಿಗೆ ನೆರವು ನೀಡಿ 5 ವರ್ಷಗಳಲ್ಲಿ ರಾಜ್ಯ, ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಕ್ರೀಡಾ ಕ್ಷೇತ್ರದಲ್ಲಿ ಕ್ರೀಡಾಪಟುಗಳು ಸಾಧನೆಗೈಯಲು ಕೊಡುಗೆ ನೀಡಿದ ಕ್ರೀಡಾಪೋಷಕರು ಈ ಪ್ರಶಸ್ತಿಗೆ ಅರ್ಹರಿರುತ್ತಾರೆ.
- ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿಯು ಪ್ರಮಾಣ ಪತ್ರ, ಪ್ರಶಸ್ತಿ ಫಲಕ, ರೂ.10.00 ಲಕ್ಷಗಳ ನಗದು ಬಹುಮಾನ ಒಳಗೊಂಡಿರುತ್ತದೆ.

- ನೀಡಲಾದ ದಾಖಲೆಗಳಲ್ಲಿ ತಪ್ಪು ಮಾಹಿತಿಯನ್ನು ನೀಡಿರುವುದು ಗಮನಕ್ಕೆ ಬಂದಲ್ಲಿ ಅಂತಹ ಅರ್ಜಿಗಳನ್ನು ಅನರ್ಹಗೊಳಿಸುವುದರ ಜೊತೆಗೆ ಪ್ರಶಸ್ತಿ ಅರ್ಜಿ ಸಲ್ಲಿಸಲು ಆಜೀವ ನಿಷೇಧ ಹೇರಲಾಗುವುದು ಮತ್ತು ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು.
- ಈ ಹಿಂದೆ ಈಗಾಗಲೇ ಈ ಪ್ರಶಸ್ತಿಯನ್ನು ಪಡೆದವರು ಅರ್ಹರಿರುವುದಿಲ್ಲ.ಪ್ರಶಸ್ತಿಗಾಗಿ ಶಿಫಾರಸ್ಸು ಮಾಡಿರುವ ಕ್ರೀಡಾ ಪೋಷಕರು ಈ ಪ್ರಶಸ್ತಿಯ ನೀತಿನಿಯಮಗಳನ್ನು ಒಪ್ಪಿಕೊಳ್ಳತಕ್ಕದ್ದು.

ಆಯುಕ್ತರು
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.